ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE 21/3/20

## ಮುನಿರತ್ನ ಆಯ್ಕೆ ಅಸಿಂಧು ಕೋರಿದ ಮಧ್ಯಂತರ ಮನವಿ ವಜಾ

**ಬೆಂಗಳೂರು:** ಬೆಂಗಳೂರಿನ ರಾಜರಾಜೇಶ್ವರಿನಗರ ಕ್ಷೇತ್ರದ ಉಪಚುನಾವಣೆಗೆ ಎದುರಾಗಿದ್ದ ಕಾನೂನಿನ ಅಡಚಣೆ ನಿವಾರಣೆಯಾಗಿದೆ. ಯಾವುದೇ ವಿಧಾನಸಭಾ ಕ್ಷೇತ್ರವನ್ನು ಹಾಗೆಯೇ ಬಿಡಬಾರದು ಹಾಗೂ ಅದನ್ನು ಪ್ರತಿನಿಧಿಸುವವರು ಯಾರೂ ಇಲ್ಲದಂತೆ ಬಿಡುವಂತಿಲ್ಲ ಎಂದು ಹೈಕೋರ್ಟ್ ಹೇಳುವ ಮೂಲಕ ಚುನಾವಣಾ ಕಾಯಿದೆಯ ಆಶಯದಂತೆ ಉಪ ಚುನಾವಣೆಗೆ ಹಾದಿ ಸುಗಮಗೊಳಿಸಿದೆ.



2018ರ ವಿಧಾನಸಭಾ ಚುನಾವಣೆಯಲ್ಲಿ ರಾಜರಾಜೇಶ್ವರಿನಗರ ವಿಧಾನಸಭೆ ಕ್ಷೇತ್ರದ ಕಾಂಗ್ರೆಸ್‌ನ ವಿಜೇತ ಅಭ್ಯರ್ಥಿ (ಸದ್ಯ ಅನರ್ಹ) ಎನ್.ಮುನಿರತ್ನ ಚುನಾವಣಾ ಅಕ್ರಮ ಎಸಗಿದ್ದು ಅವರ ಆಯ್ಕೆಯನ್ನು ಅಸಿಂಧುಗೊಳಿಸಿ ತಮ್ಮನ್ನೇ ಆಯ್ಕೆ ಮಾಡಬೇಕೆಂದು ಕೋರಿ ಪರಾಜಿತ ಅಭ್ಯರ್ಥಿ ತುಳಸಿ ಮುನಿರಾಜುಗೌಡ ಸಲ್ಲಿಸಿದ್ದ ಮಧ್ಯಂತರ ಮನವಿಯನ್ನು ಹೈಕೋರ್ಟ್ ವಜಾ ಮಾಡಿದೆ.

ಹಾಗಾಗಿ, ಚುನಾವಣಾ ತಕರಾರು ಅರ್ಜಿ ಬಾಕಿ ಇದ್ದರೂ ಚುನಾವಣಾ ಆಯೋಗಕ್ಕೆ ಇಷ್ಟು ದಿನ ಉಪ ಚುನಾವಣೆ ನಡೆಸಲು ಇದ್ದ ಅಡ್ಡಿ ನಿವಾರಣೆಯಾಗಲಿದ್ದು, ಅದು ನಿಯಮದಂತೆ ಚುನಾವಣೆ ನಡೆಸಲು ಅನುಕೂಲವಾಗಲಿದೆ.

ತುಳಸಿ ಮುನಿರಾಜುಗೌಡ ಸಲ್ಲಿಸಿದ್ದ ಎರಡು ಮಧ್ಯಂತರ ಅರ್ಜಿಗಳಲ್ಲಿ ಒಂದನ್ನು ತಿರಸ್ಕರಿಸಿರುವ ನ್ಯಾಯಪೀಠ, ಮುನಿರತ್ನ ಸಲ್ಲಿಸಿದ್ದ ಮೂರು ಮಧ್ಯಂತರ ಅರ್ಜಿಗಳಲ್ಲಿ ಒಂದನ್ನು ಅಂಗೀಕರಿಸಿ, ಎರಡನ್ನು ತಿರಸ್ಕರಿಸಿದೆ. ಮಧ್ಯಂತರ ಅರ್ಜಿಗಳ ಮನವಿ ಆಲಿಸಿ ತೀರ್ಪು ಕಾಯ್ದಿರಿಸಿದ್ದ ನ್ಯಾಯಮೂರ್ತಿ ಕೃಷ್ಣ ಎಸ್. ದೀಕ್ಷಿತ್ ಅವರಿದ್ದ ಏಕಸದಸ್ಯ ಪೀಠ, ಶುಕ್ರವಾರ ಕಲಬುರಗಿ ನ್ಯಾಯಪೀಠದಿಂದ ವಿಡಿಯೊ ಕಾನ್ಫರೆನ್ಸ್ ಮೂಲಕ ತೀರ್ಪು ಪ್ರಕಟಿಸಿತು. ಚುನಾವಣಾ ಅಕ್ರಮ ಎಸಗಿದ್ದಾರೆ ಎಂಬುದಕ್ಕೆ ಸಾಕ್ಷ್ಯ ಒದಗಿಸಲು ಕೋರಿದ ಅಂಶವನ್ನು ತಿದ್ದುಪಡಿ ಅರ್ಜಿಯಲ್ಲಿ ಸೇರಿಸಲು ನ್ಯಾಯಪೀಠ ಅರ್ಜಿದಾರರಿಗೆ ಅವಕಾಶ ಕಲ್ಪಿಸಿದೆ.